# ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
# ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.

ಸಂ:ಉನಿಚಿ/ಮಮಅಇ/ಅಂ.ಕಾ/ಅಂ.ಸ/2018-19

ಉಪನಿರ್ದೇಶಕರ ಕಛೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ನೂತನ ಜಿಲ್ಲಾಡಳಿತ ಭವನ
ಕೊಠಡಿ ಸಂ:ಎಫ್.ಬಿ-5&6, 1ನೇ ಮಹಡಿ
ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ
ದಿನಾಂಕ:20.03.2019

**ವಿಷಯ:-** ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಹುದ್ದೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸುವ ಬಗ್ಗೆ.

**ಉಲ್ಲೇಖ:-** ಸರ್ಕಾರಿ ಆದೇಶದ ಸಂ:ಮಮಇ/303/ಐಸಿಡಿ/2017 ಬೆಂಗಳೂರು ದಿನಾಂಕ: 23.09.2017

* * * * * * *

ಚಿಕ್ಕಬಳ್ಳಾಪುರ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 6 ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯ ಈ ಕೆಳಗೆ ಕಾಣಿಸಲಾದ ಗ್ರಾಮಗಳ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಹಾಗೂ ಸಹಾಯಕಿಯಾಗಿ ಗೌರವಸೇವೆ ಸಲ್ಲಿಸಲು ಈ ಕೆಳಗೆ ತೋರಿಸಲಾದ ಮಿಸಲಾತಿ ಹೊಂದಿದ 18 ರಿಂದ 35 ವರ್ಷದೊಳಗಿನ ಅರ್ಹ ಸ್ಥಳೀಯ (ಅದೇ ಗ್ರಾಮದ) ಮಹಿಳಾ ಅಭ್ಯರ್ಥಿಗಳಿಂದ ಮಾತ್ರ ಈ ಕೆಳಗೆ ತೋರಿಸಲಾದ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಯಾಗಲು ಎಸ್.ಎಸ್.ಎಲ್.ಸಿ ತೇರ್ಗಡೆಯಾಗಿರಬೇಕು. ಅಂಗನವಾಡಿ ಸಹಾಯಕಿಯಾಗಲು ಕನಿಷ್ಟ 4ನೇ ತರಗತಿ ತೇರ್ಗಡೆಯಾಗಿದ್ದು, ಗರಿಷ್ಠ ವಿದ್ಯಾರ್ಹತೆ 9ನೇ ತರಗತಿ ತೇರ್ಗಡೆಯಾಗಿರಬೇಕು. ಈ ಕೆಳಗೆ ತೋರಿಸಲಾದ ಎಲ್ಲಾ ದಾಖಲೆಗಳೊಂದಿಗೆ ಸಂಬಂಧಿತರು ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:13.04.2019ರೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಿದೆ.

## ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:

1. ಭರ್ತಿ ಮಾಡಿದ ಅರ್ಜಿ ನಮೂನೆ (ಆನ್‌ಲೈನ್)
2. ಜನನ ಪ್ರಮಾಣ ಪತ್ರ/ಜನ್ಮದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ
3. ತಹಶೀಲ್ದಾರ್‌ರು/ಉಪತಹಶೀಲ್ದಾರ್‌ರಿಂದ ಪಡೆದ 1 ವರ್ಷದೊಳಗಿನ ವಾಸಸ್ಥಳ ದೃಡೀಕರಣ ಪತ್ರ.
4. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಕಾರ್ಯಕರ್ತೆ ಹುದ್ದೆಗೆ 10ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿರುವವರು 10ನೇ ತರಗತಿಯ ಅಂಕಪಟ್ಟಿಯನ್ನು ಲಗತ್ತಿಸುವುದು)
5. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಸಹಾಯಕಿ ಹುದ್ದೆಗೆ 9ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿರುವವರು 9ನೇ ತರಗತಿಯ ಅಂಕಪಟ್ಟಿಯನ್ನು ಲಗತ್ತಿಸುವುದು)
6. ಮೀಸಲಾತಿ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
7. ಪತಿಯ ಮರಣ ಪ್ರಮಾಣ ಪತ್ರ (ವಿಧವಾ ವೇತನದ ದೃಡೀಕರಣವನ್ನು ಪರಿಗಣಿಸುವುದಿಲ್ಲ.)
8. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.

9. ಅಂಗವಿಕಲತೆ ಪ್ರಮಾಣ ಪತ್ರ (ದೈಹಿಕ ಅಂಗವಿಕಲತೆ ಶೇ.60 ಕ್ಕಿಂತ ಕಡಿಮೆ ಇದ್ದಲ್ಲಿ ಮಾತ್ರ) (ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರಿಗೆ ಮಾತ್ರ( (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ.)
10. ವಿಚ್ಛೇದನ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು)
11. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ.
12. ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.
13. ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
14. ಯೋಜನಾ ನಿರಾಶ್ರಿತರೆಂಬ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.
15. ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿ ಆಗಿದ್ದಲ್ಲಿ, ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಆಯ್ಕೆಯಾದಲ್ಲಿ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕಿರುತ್ತದೆ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಜಿಲ್ಲಾ ಕಛೇರಿ, ಚಿಕ್ಕಬಳ್ಳಾಪುರ

**ಪ್ರತಿಯನ್ನು:**

1. ಮಾನ್ಯ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರ ಮಾಹಿತಿಗಾಗಿ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ರವರ ಮಾಹಿತಿಗಾಗಿ.
3. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬಾಗೇಪಲ್ಲಿ/ ಚಿಕ್ಕಬಳ್ಳಾಪುರ / ಚಿಂತಾಮಣಿ/ ಗೌರಿಬಿದನೂರು/ ಗುಡಿಬಂಡೆ/ ಶಿಡ್ಲಘಟ್ಟ ರವರ ಮುಂದಿನ ಕ್ರಮಕ್ಕಾಗಿ.
4. ಕಛೇರಿ ಪತ್ರಿ.

**ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.**

ಸಂ:ಉನಿಚಿ/ಮಮಅಇ/ಅಂ.ಕಾ/ಅಂ.ಸ/2019-20

ಉಪನಿರ್ದೇಶಕರ ಕಛೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ನೂತನ ಜಿಲ್ಲಾಡಳಿತ ಭವನ
ಕೊಠಡಿ ಸಂ:ಎಫ್.ಬಿ-5&6, 1ನೇ ಮಹಡಿ
ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ
ದಿನಾಂಕ:20.03.2020

## ಅಧಿಸೂಚನೆ

ಚಿಕ್ಕಬಳ್ಳಾಪುರ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 6 ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ 09 ಅಂಗನವಾಡಿ ಕಾರ್ಯಕರ್ತೆ, 13 ಮಿನಿ ಅಂಗನವಾಡಿ ಕಾರ್ಯಕರ್ತೆ ಮತ್ತು 66 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಈ ಸಂಬಂಧ ಹೆಚ್ಚಿನ ವಿವರಗಳಿಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಲು ಕೋರಿದೆ.

| | |
|---|---|
| ಅರ್ಜಿ ಸಲ್ಲುಸಲು ನಿಗದಿಪಡಿಸಿದ ಪ್ರಾರಂಭದ ದಿನಾಂಕ | 21.03.2020 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 13.04.2020 |
| ವೆಬ್ ಸೈಟ್ ವಿಳಾಸ | **http://anganwadirecruit.kar.nic.in** |

(ಸಹಿ)
**ಉಪನಿರ್ದೇಶಕರು**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,**
**ಜಿಲ್ಲಾ ಕಛೇರಿ, ಚಿಕ್ಕಬಳ್ಳಾಪುರ**

Com-4/Md.usman sir/AWW AWH Appointment Notification